# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
## Karnataka Examinations Authority

ಸಂಖ್ಯೆ: ಇಡಿ/ಕೆಇಎ/ನೇಮಕಾತಿ/2022-23(ಕೆಕೆ) ದಿನಾಂಕ: 10.07.2023
ಸಂಖ್ಯೆ: ಇಡಿ/ಕೆಇಎ/ನೇಮಕಾತಿ/2022-23(ಆರ್‌ಪಿಸಿ) ದಿನಾಂಕ: 10.07.2023

## ತಿದ್ದುಪಡಿ ಅಧಿಸೂಚನೆ

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು ಇಲ್ಲಿ ಖಾಲಿ ಇರುವ ಮಿಕ್ಕುಳಿದ ವೃಂದ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ (ಸ್ಥಳೀಯ) ವೃಂದದ ವಿವಿಧ ಹುದ್ದೆಗಳಿಗೆ ನೇರ ನೇಮಕಾತಿ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ ದಿನಾಂಕ 22.07.2023 ವರೆಗೆ ಅವಕಾಶ ನೀಡಲಾಗಿದೆ.**

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಪತ್ರ ದಿನಾಂಕ 01.07.2023 ರಲ್ಲಿ ತಿಳಿಸಿರುವಂತೆ, ದಿನಾಂಕ 23.06.2023 ರ ಅಧಿಸೂಚನೆಯಲ್ಲಿ ಸೂಚಿಸಿರುವ ವಯೋಮಿತಿ ಸಡಿಲಿಕೆಯೊಂದಿಗೆ ಈ ಕೆಳಗಿನಂತೆ ಓದಿಕೊಳ್ಳತಕ್ಕದ್ದು.**

"ನೇರ ನೇಮಕಾತಿಗೆ ಅಧಿಸೂಚನೆಯ ದಿನಾಂಕದಂದು, ಈಗಾಗಲೇ ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಮಂಡಳಿಯಲ್ಲಿ ಕೆಲಸ ಮಾಡುತ್ತಿರುವ ಅಭ್ಯರ್ಥಿಗಳು, ಮಂಡಳಿಯಲ್ಲಿ ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸಿದ ಒಟ್ಟು ವರ್ಷಗಳಷ್ಟು ವಯಸ್ಸಿನ ಸಡಿಲಿಕೆಗೆ ಅರ್ಹರಾಗಿರುತ್ತಾರೆ. ಗರಿಷ್ಠ ವಯಸ್ಸಿನ ಸಡಿಲಿಕೆಯು ನಲವತ್ತೈದು ವರ್ಷಗಳನ್ನು ಮೀರುವಂತಿಲ್ಲ."

**ಹಾಗೂ ದಿನಾಂಕ 23.06.2023 ರ ಅಧಿಸೂಚನೆಯಲ್ಲಿ ಸೂಚಿಸಿರುವ ಕ್ರಮ ಸಂಖ್ಯೆ 7 ರ ಸ್ಪರ್ಧಾತ್ಮಕ ಪರೀಕ್ಷಾ ವಿಧಾನದೊಂದಿಗೆ ಈ ಕೆಳಗಿನಂತೆ ಓದಿಕೊಳ್ಳತಕ್ಕದ್ದು.**

"**Weightage of marks:**ನೇರ ನೇಮಕಾತಿಗೆ ಪರಿಗಣಿಸುವಾಗ ಈಗಾಗಲೇ ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಮಂಡಳಿಯಲ್ಲಿ ಕೆಲಸ ಮಾಡುತ್ತಿರುವ ಅಭ್ಯರ್ಥಿಗಳು ಸಲ್ಲಿಸಿದ ಸೇವೆಯ ಪ್ರತಿ ವರ್ಷಕ್ಕೆ ಶೇಕಡಾ 1 ರಷ್ಟು ಹೆಚ್ಚುವರಿ ವೇಟೇಜ್ ನೀಡಲಾಗುವುದು."

**ಮೇಲಿನ ವಯೋಮಿತಿಯ ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ. ಉಳಿದಂತೆ ಪ್ರಸ್ತುತ ನೇಮಕಾತಿ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.**

**ಗಮನಿಸಿ:**

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆಯುವುದು ಅಭ್ಯರ್ಥಿಗಳಿಗೆ ಈ ಮೇಲ್ಕಂಡ ಹುದ್ದೆಗಳ ನೇಮಕಾತಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 (ತಿದ್ದುಪಡಿಗಳು), ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ ನಿಯಮಗಳು) 2021 ಹಾಗು ಕರಾವಿಅನಿನಿ ದ ವೃಂದ ಮತ್ತು ನೇಮಕಾತಿ ಇತರೆ ನಿಯಮಗಳಲ್ಲಿರುವಂತೆ ಅನ್ವಯಿಸುತ್ತದೆ.

**ಕಾರ್ಯನಿರ್ವಾಹಕ ನಿರ್ದೇಶಕರು**
**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in